<u>ಕರ್ನಾಟಕ ವಿಧಾನ ಪರಿಷತ್ತು</u>

| | | | |
|---|---|---|---|
| 1) | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 68 (571) |
| 2) | ಸದಸ್ಯರ ಹೆಸರು | : | ಶ್ರೀಮತಿ ಎಸ್. ವೀಣಾ ಅಚ್ಚಯ್ಯ<br>(ವಿಧಾನಸಭೆಯಿಂದ ಚುನಾಯಿತರಾದವರು) |
| 3) | ಉತ್ತರಿಸುವ ದಿನಾಂಕ | : | 09.03.2020. |
| 4) | ಉತ್ತರಿಸುವವರು | : | ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು. |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಾಡುಪ್ರಾಣಿಗಳ ದಾಳಿಯಿಂದ ವ್ಯಕ್ತಿ ಮೃತಪಟ್ಟಾಗ ಆ ಕುಟುಂಬಕ್ಕೆ ಹಾಗೂ ಕಾಡುಪ್ರಾಣಿಗಳ ದಾಳಿಯಿಂದಾಗಿ ಜಾನುವಾರು ಕಳೆದುಕೊಂಡ ಕುಟುಂಬಗಳಿಗೆ ನೀಡುತ್ತಿರುವ ಪರಿಹಾರ ಮೊತ್ತವೆಷ್ಟು; (ಅನುಸರಿಸುತ್ತಿರುವ ನಿಯಮಗಳು / ಮಾನದಂಡಗಳು ಹಾಗೂ ಇಡೀ ಪ್ರಕ್ರಿಯೆಯ ಸಂಪೂರ್ಣ ವಿವರ ನೀಡುವುದು) | ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಮಾನವ-ಪ್ರಾಣ ಹಾನಿ ಪ್ರಕರಣಗಳಲ್ಲಿ ಈ ಕೆಳಕಂಡಂತೆ ದಯಾತ್ಮಕ ಧನ ಪಾವತಿಸಲಾಗುತ್ತಿದೆ:<br><br>ಸರ್ಕಾರದ ಆದೇಶ ಸಂಖ್ಯೆ: ಅಪಜೀ 66 ಎಫ್‌ಡಬ್ಲ್ಯೂ ಎಲ್ 2019, ದಿನಾಂಕ: 07.01.2020 ರನ್ವಯ ವನ್ಯಪ್ರಾಣಿಗಳಿಂದ ಮೃತಪಟ್ಟಿರುವ ವ್ಯಕ್ತಿಯ ವಾರಸುದಾರರಿಗೆ ರೂ.7,50,000/- ಗಳ (ಏಳೂವರೆ ಲಕ್ಷ ರೂಪಾಯಿಗಳು ಮಾತ್ರ) ದಯಾತ್ಮಕ ಧನವನ್ನು, ಸರ್ಕಾರದ ಆದೇಶ ಸಂಖ್ಯೆ: ಅಪಜೀ 143 ಎಫ್‌ಡಬ್ಲ್ಯೂಎಲ್ 2010, ದಿನಾಂಕ: 03.08.2011 ರಲ್ಲಿ ನೀಡಲಾಗಿರುವ ಈ ಕೆಳಕಂಡ ಷರತ್ತುಗಳನ್ವಯ ಮಂಜೂರು ಮಾಡಲಾಗುತ್ತದೆ:-<br><br>"ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಮಾನವ-ಪ್ರಾಣ ಹಾನಿ ಪ್ರಕರಣಗಳಲ್ಲಿ, ಘಟನೆ ನಡೆದ ಕೂಡಲೇ ರೂ.2,00,000/- ಗಳನ್ನು (ಎರಡು ಲಕ್ಷ ರೂಪಾಯಿಗಳು ಮಾತ್ರ) ಪಾವತಿಸಲಾಗುವುದು ಹಾಗೂ ಇನ್ನುಳಿದ ಮೊತ್ತವನ್ನು ಮೃತಪಟ್ಟ ವ್ಯಕ್ತಿಯು ಅರಣ್ಯ ಪ್ರದೇಶಗಳಲ್ಲಿ ಕಾನೂನುಬಾಹಿರ ಚಟುವಟಿಕೆಯಲ್ಲಿ ತೊಡಗಿಲ್ಲವೆಂದೂ ಮತ್ತು ಉಪ ಅರಣ್ಯ ಸಂರಕ್ಷಣಾಧಿಕಾರಿಯವರ ಹಂತದಲ್ಲಿ ವಿಚಾರಣೆ ನಡೆಸಿ, ಮರಣೋತ್ತರ ಪರೀಕ್ಷೆಯಲ್ಲಿ ಮೃತ ವ್ಯಕ್ತಿಯು ವನ್ಯಪ್ರಾಣಿ ದಾಳಿಯಿಂದ ಮೃತಪಟ್ಟಿರುವ ಬಗ್ಗೆ ದೃಢಪಟ್ಟಲ್ಲಿ, ಮೃತ ಕುಟುಂಬದ ವಾರಸುದಾರರಿಗೆ ದಯಾತ್ಮಕ ಧನವನ್ನು ಬಿಡುಗಡೆ ಮಾಡಲಾಗುವುದು".<br><br>ಮೇಲಿನಂತೆ ದಯಾತ್ಮಕ ಧನವನ್ನು ಪಾವತಿಸುವುದರ ಜೊತೆಗೆ, ಸರ್ಕಾರದ ಆದೇಶ ಸಂಖ್ಯೆ. ಅಪಜೀ 61 ಎಫ್‌ಎಪಿ 2018, ದಿನಾಂಕ: 16.10.2018 ರನ್ವಯ ವನ್ಯಪ್ರಾಣಿ ದಾಳಿಯಿಂದ ಮೃತಪಡುವ ವ್ಯಕ್ತಿಯ ಕುಟುಂಬದ ವಾರಸುದಾರರಿಗೆ 05 ವರ್ಷಗಳವರೆಗೆ ರೂ. 2,000/-ಗಳ (ಎರಡು ಸಾವಿರ ರೂಪಾಯಿಗಳು ಮಾತ್ರ) ಮಾಸಾಶನವನ್ನು ಪಾವತಿಸಲಾಗುತ್ತಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಅಪಜೀ 109 ಎಫ್‌ಎಪಿ 2014, ದಿನಾಂಕ: 13.08.2014 ರನ್ವಯ ವನ್ಯಪ್ರಾಣಿಗಳ ದಾಳಿಯಿಂದ ಸಾಕುಪ್ರಾಣಿಗಳಾದ ಹಸು, ಎತ್ತು, ಎಮ್ಮೆ, ಕೋಣ ಮೃತಪಟ್ಟ ಪ್ರಕರಣಗಳಲ್ಲಿ ರೂ.10,000/- ಗಳನ್ನು (ಹತ್ತು ಸಾವಿರ ರೂಪಾಯಿಗಳು ಮಾತ್ರ) ಹಾಗೂ ಮೇಕೆ, ಕುರಿ ಮೃತಪಟ್ಟಲ್ಲಿ ರೂ.5,000/-ಗಳ (ಐದು ಸಾವಿರ ರೂಪಾಯಿಗಳು ಮಾತ್ರ ದಯಾತ್ಮಕ ಧನವನ್ನು ಪಾವತಿಸಲಾಗುತ್ತಿದೆ. |

| | | |
|---|---|---|
| | | ಮರಣೋತ್ತರ ಪರೀಕ್ಷೆಯಲ್ಲಿ ವನ್ಯಪ್ರಾಣಿ ದಾಳಿಯಿಂದ ಸಾಕುಪ್ರಾಣಿಗೆ ಪ್ರಾಣ ಹಾನಿಯಾಗಿರುವ ಬಗ್ಗೆ ಪಶುವೈದ್ಯಾಧಿಕಾರಿಗಳು ದೃಢೀಕರಿಸಿದ ಮೇಲೆ, ನಿಯಮಾನುಸಾರ ಪರಿಶೀಲಿಸಿ ದಯಾತ್ಮಕ ಧನವನ್ನು ಪಾವತಿಸಲಾಗುತ್ತಿದೆ. |
| ಆ)<br><br><br><br><br><br><br>ಇ) | ವ್ಯಕ್ತಿ ಹಾಗೂ ಜಾನುವಾರುಗಳನ್ನು ಕಳೆದುಕೊಂಡ ಸಂದರ್ಭದಲ್ಲಿ ಈಗ ನೀಡುತ್ತಿರುವ ಮೊತ್ತ ಅತ್ಯಂತ ಕಡಿಮೆ ಇದ್ದು, ಅದನ್ನು ಗಣನೀಯವಾಗಿ ಹೆಚ್ಚಿಸಬೇಕಾಗಿದ್ದು, ಈ ಕುರಿತು ಸರ್ಕಾರ ತುರ್ತಾಗಿ ಕ್ರಮವಹಿಸುವುದೇ;<br><br>ಯಾವ ಕಾಲಮಿತಿಯೊಳಗೆ ಪರಿಹಾರ ಮೊತ್ತವನ್ನು ಹೆಚ್ಚಿಸಲಾಗುವುದು? | ಹೌದು.<br><br>ವನ್ಯಪ್ರಾಣಿ ದಾಳಿಯಿಂದ ಉಂಟಾಗುವ ಮಾನವ ಪ್ರಾಣಹಾನಿ ಪ್ರಕರಣದಲ್ಲಿ ಈ ಹಿಂದೆ ಪಾವತಿಸಲಾಗುತ್ತಿದ್ದ ರೂ. 5,00,000/- ಗಳ (ಐದು ಲಕ್ಷ ರೂಪಾಯಿಗಳು ಮಾತ್ರ) ದಯಾತ್ಮಕ ಧನವನ್ನು ಸರ್ಕಾರದ ಆದೇಶ ಸಂಖ್ಯೆ: ಅಪಜೀ 66 ಎಫ್‌ಡಬ್ಲ್ಯೂ ಎಲ್ 2019, ದಿನಾಂಕ: 07.01.2020 ರಲ್ಲಿ ರೂ.7,50,000/- ಗಳಿಗೆ (ಏಳೂವರೆ ಲಕ್ಷ ರೂಪಾಯಿಗಳು ಮಾತ್ರ) ಹೆಚ್ಚಿಸಲಾಗಿರುತ್ತದೆ.<br><br>ವನ್ಯಪ್ರಾಣಿ ದಾಳಿಯಿಂದ ಉಂಟಾಗುವ ಸಾಕುಪ್ರಾಣಿ ಹತ್ಯೆ ಪ್ರಕರಣಗಳಲ್ಲಿ ಪ್ರಸ್ತುತ ಪಾವತಿಸಲಾಗುತ್ತಿರುವ ದಯಾತ್ಮಕ ಧನವನ್ನು ಹೆಚ್ಚಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. |

ಸಂಖ್ಯೆ: ಅಪಜೀ 32 ಎಫ್ ಡಬ್ಲ್ಯೂ ಎಲ್ 2020

06/03/2020

(ಆನಂದ್ ಸಿಂಗ್)

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವನ್ಯಪ್ರಾಣಿಗಳ ದಾಳಿಯಿಂದ ಮೃತಪಟ್ಟವರ ಕುಟುಂಬಕ್ಕೆ ನೀಡಲಾಗುತ್ತಿರುವ ದಯಾತ್ಮಕ ಧನವನ್ನು ಪರಿಷ್ಕರಿಸುವ ಬಗ್ಗೆ.

ಓದಲಾಗಿದೆ:
1. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ(ವನ್ಯಜೀವಿ) ಇವರ ಪತ್ರ ಸಂಖ್ಯೆ: ಪ್ರಮುಅಸಂ (ವಜೀ)/ಸಿ2/ಸಿಆರ್–03/2018–19, ದಿನಾಂಕ: 31.01.2019.
2. ಸರ್ಕಾರದ ಆದೇಶ ಸಂಖ್ಯೆ: ಅಪಜೀ 143 ಎಫ್‌ಡಬ್ಲ್ಯೂಲ್ 2010, ದಿನಾಂಕ: 03.08.2011.

***

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ದಿನಾಂಕ: 31.01.2019ರ ಪತ್ರದಲ್ಲಿ, ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ(ವನ್ಯಜೀವಿ) ಇವರು ವನ್ಯಜೀವಿಗಳ ದಾಳಿಯಿಂದ ಉಂಟಾಗುವ ಮಾನವ ಪ್ರಾಣಹಾನಿ ಪ್ರಕರಣಗಳಿಗೆ ಸಂಬಂಧಿಸಿದಂತೆ ದಿನಾಂಕ: 08.06.2011ರಿಂದ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ರೂ.5.00 ಲಕ್ಷಗಳ ದಯಾತ್ಮಕ ಧನವನ್ನು ಕೆಲವೊಂದು ಷರತ್ತಿಗೊಳಪಟ್ಟು ಮೃತರ ವಾರಸುದಾರರಿಗೆ ಮಂಜೂರು ಮಾಡಲು ಆದೇಶಲಾಗಿದ್ದು, ಸದರಿ ದಯಾತ್ಮಕ ಧನದ ಮೊತ್ತವನ್ನು ಕಳೆದ ಎಂಟು ವರ್ಷಗಳಿಂದ ಪರಿಷ್ಕರಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಮುಂದುವರೆದು, ಮಾನ್ಯ ಮುಖ್ಯ ಮಂತ್ರಿಯವರ ಅಧ್ಯಕ್ಷತೆಯಲ್ಲಿ ದಿನಾಂಕ:09.01.2019ರಂದು ನಡೆದ 11ನೇ ರಾಜ್ಯ ವನ್ಯಜೀವಿ ಮಂಡಳಿಯ ಸಭೆಯಲ್ಲಿ ವನ್ಯಪ್ರಾಣಿಗಳ ದಾಳಿಯಿಂದ ಉಂಟಾದ ಮಾನವ ಪ್ರಾಣಹಾನಿ ಪ್ರಕರಣಗಳಲ್ಲಿ ಪ್ರಸ್ತುತ ನೀಡ್ಲುತ್ತಿರುವ ದಯಾತ್ಮಕ ಧನವನ್ನು ಪರಿಷ್ಕರಿಸುವ ಕುರಿತು ಪ್ರಸ್ತಾವನೆಯನ್ನು ಸಲ್ಲಿಸುವಂತೆ ಮಾನ್ಯ ಮುಖ್ಯಮಂತ್ರಿಯವರು ಸೂಚಿಸಿರುತ್ತಾರೆ. ಅದರಂತೆ ಕಳೆದ ಮೂರು ವರ್ಷಗಳಲ್ಲಿ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾದ ಮಾನವ ಪ್ರಾಣಹಾನಿ ಪ್ರಕರಣಗಳ ಅಂಕಿಅಂಶಗಳ ಕುರಿತು ಈ ಕೆಳಕಂಡಂತೆ ಮಾಹಿತಿಯನ್ನು ಒದಗಿಸಿ, ಪ್ರಸ್ತುತ ನೀಡಲಾಗುತ್ತಿರುವ ದಯಾತ್ಮಕ ಧನವನ್ನು ರೂ.5.00 ಲಕ್ಷಗಳಿಂದ ರೂ.10.00 ಲಕ್ಷಗಳಿಗೆ ಹೆಚ್ಚಿಸಿ ಆದೇಶವನ್ನು ಹೊರಡಿಸುವಂತೆ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ(ವನ್ಯಜೀವಿ) ರವರು ಕೋರಿರುತ್ತಾರೆ.

| ಕ್ರ ಸಂ. | ವರ್ಷ | ಮಾನವ ಪ್ರಾಣಹಾನಿ ಸಂಖ್ಯೆ |
|---|---|---|
| 1 | 2015–16 | 47 |
| 2 | 2016–17 | 49 |
| 3 | 2017–18 | 36 |
| 4 | 2018–19 | 21 |

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಅಪಜೀ 66 ಎಫ್‌ಡಬ್ಲ್ಯೂಎಲ್ 2019**
**ಬೆಂಗಳೂರು, ದಿನಾಂಕ: 07.01.2020.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಮಾನವ ಪ್ರಾಣಹಾನಿ ಪ್ರಕರಣಗಳಲ್ಲಿ ಮೃತರ ವಾರಸುದಾರರಿಗೆ ಪರಿಹಾರವಾಗಿ ಪ್ರಸ್ತುತ ನೀಡಲಾಗುತ್ತಿರುವ ದಯಾತ್ಮಕ ಧನ ರೂ. 5.00 ಲಕ್ಷಗಳ ಮೊತ್ತವನ್ನು ರೂ. 7.50 ಲಕ್ಷ (ಏಳೂವರೆ ಲಕ್ಷ ರೂಪಾಯಿಗಳು ಮಾತ್ರ) ಗಳಿಗೆ ಹೆಚ್ಚಿಸಿ ಈ ಕೆಳಕಂಡ ಷರತ್ತಿಗೊಳಪಟ್ಟು ಆದೇಶಿಸಲಾಗಿದೆ.

1. ಇದು ಭವಿಷ್ಯವರ್ತಿಯಾಗಿ ಅನ್ವಯವಾಗತಕ್ಕದ್ದು.
2. ಇದಕ್ಕಾಗಿ ತಗಲುವ ವೆಚ್ಚವನ್ನು ಇಲಾಖೆಗೆ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು.

ಇನ್ನುಳಿದಂತೆ, ದಯಾತ್ಮಕ ಧನವನ್ನು ಮಂಜೂರು ಮಾಡಲು ಸರ್ಕಾರದ ಆದೇಶ ಸಂಖ್ಯೆ: ಅಪಜೀ 143 ಎಫ್‌ಡಬ್ಲ್ಯೂಲ್ 2010, ದಿನಾಂಕ: 03.08.2011 ರಲ್ಲಿ ನೀಡಲಾಗಿರುವ ಷರತ್ತುಗಳನ್ನು ಪಾಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 845 ವೆಚ್ಚ-5/2019, ದಿನಾಂಕ: 23.12.2019 ರಲ್ಲಿ ನೀಡಲಾಗಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಗಾಯತ್ರಿ .ಎಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ
(ಅರಣ್ಯ-ಎ)
07/01/2020.

**ಇವರಿಗೆ,**

1) ಪ್ರಧಾನ ಮಹಾಲೇಖಪಾಲರು, ಕರ್ನಾಟಕ (ಜಿ&ಎಸ್‌ಎಸ್‌ಎ / ಇ&ಆರ್‌ಎಸ್‌ಎ / ಎ&ಇ), ಬೆಂಗಳೂರು.
2) ಮಾನ್ಯ ಮುಖ್ಯಮಂತ್ರಿ ಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು), ಅರಣ್ಯಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು 560003.
4) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು 560003.
5) ಎಲ್ಲಾ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು / ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು / ಅರಣ್ಯ ಸಂರಕ್ಷಣಾಧಿಕಾರಿಗಳು - ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಇವರ ಮುಖಾಂತರ.
6) ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
7) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-5 ಮತ್ತು 7), ವಿಧಾನ ಸೌಧ, ಬೆಂಗಳೂರು.
8) ಶಾಖಾ ರಕ್ಷಕ ಕಡತ.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕಾಡು ಪ್ರಾಣಿಗಳ ದಾಳಿಯಿಂದ ಉಂಟಾದ ಮಾನವ ಪ್ರಾಣಹಾನಿ ಪ್ರಕರಣಗಳಲ್ಲಿ ಮೃತಪಟ್ಟವರ ವಾರಸುದಾರರಿಗೆ ನೀಡಲಾಗುತ್ತಿರುವ ಪರಿಹಾರದ ಧನದ ಮೊತ್ತವನ್ನು ಪರಿಷ್ಕರಿಸಿ ಹೆಚ್ಚಿಸುವ ಬಗ್ಗೆ.

*******

**ಓದಲಾಗಿದೆ:**

ಸರ್ಕಾರದ ಆದೇಶದ ಸಂಖ್ಯೆ: ಅಪಜೀ 143 ಎಫ್‌ಡಬ್ಲ್ಯುಎಲ್ 2010 ದಿನಾಂಕ: 30.04.2011.

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ: 30.04.2011 ರ ಸರ್ಕಾರಿ ಆದೇಶದಲ್ಲಿ ಕಾಡು ಪ್ರಾಣಿಗಳಿಂದ ಉಂಟಾದ ಮಾನವ ಪ್ರಾಣ ಹಾನಿ ಪ್ರಕರಣಗಳಲ್ಲಿ ಮೃತಪಟ್ಟ ವ್ಯಕ್ತಿಯು ಅರಣ್ಯ ಪ್ರದೇಶಗಳಲ್ಲಿ ಕಾನೂನು ಬಾಹಿರ ಚಟುವಟಿಕೆಯಲ್ಲಿ ತೊಡಗಿಲ್ಲವೆಂದೂ ಹಾಗೂ ಮರಣೋತ್ತರ ಪರೀಕ್ಷೆಯ ವರದಿಯಲ್ಲಿ ಸದರಿ ವ್ಯಕ್ತಿಯು ವನ್ಯ ಮೃಗಗಳಿಂದ ಮೃತನಾಗಿದ್ದಾನೆಂದು ದೃಢಪಟ್ಟದ್ದರೆ, ಮರಣ ಹೊಂದಿದ ವ್ಯಕ್ತಿಯ ವಾರಸುದಾರರಿಗೆ ರೂ.3.50 ಲಕ್ಷಗಳನ್ನು ಮಂಜೂರು ಮಾಡಲು ಆದೇಶ ನೀಡಲಾಗಿತ್ತು. ಹಾಗೂ ಈ ಪರಿಹಾರ ಧನವನ್ನು ಮಂಜೂರು ಮಾಡಲು ಕ್ಷೇತ್ರ ವ್ಯಾಪ್ತಿಯ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ/ಅರಣ್ಯ ಸಂರಕ್ಷಣಾಧಿಕಾರಿ/ಉಪ ಅರಣ್ಯ ಸಂರಕ್ಷಣಾಧಿಕಾರಿಯವರಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿತ್ತು.

2. ಈಗ ಸರ್ಕಾರವು ಮೇಲ್ಕಂಡ ಆದೇಶವನ್ನು ಪುನರ್ ಪರಿಶೀಲಿಸಿ ಈ ಕೆಳಗಿನಂತೆ ಆದೇಶ ಹೊರಡಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಅಪಜೀ 143 ಎಫ್‌ಡಬ್ಲ್ಯುಎಲ್ 2010
## ಬೆಂಗಳೂರು. ದಿನಾಂಕ: 03/08/2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಕಾಡು ಪ್ರಾಣಿಗಳಿಂದ ಉಂಟಾದ ಮಾನವ ಪ್ರಾಣ ಹಾನಿ ಪ್ರಕರಣಗಳಲ್ಲಿ ಮೃತಪಟ್ಟ ವ್ಯಕ್ತಿಯು ಅರಣ್ಯ ಪ್ರದೇಶಗಳಲ್ಲಿ ಕಾನೂನು ಬಾಹಿರ ಚಟುವಟಿಕೆಯಲ್ಲಿ ತೊಡಗಿಲ್ಲವೆಂದೂ ಹಾಗೂ ಮರಣೋತ್ತರ ಪರೀಕ್ಷೆಯ ವರದಿಯಲ್ಲಿ ಸದರಿ ವ್ಯಕ್ತಿಯು ವನ್ಯ ಮೃಗಗಳಿಂದ ಮೃತನಾಗಿದ್ದಾನೆಂದು ದೃಢಪಟ್ಟಲ್ಲಿ ಮರಣ ಹೊಂದಿದ ವ್ಯಕ್ತಿಯ ವಾರಸುದಾರರಿಗೆ ರೂ.5.00 ಲಕ್ಷಗಳ (ರೂಪಾಯಿಗಳು ಐದು ಲಕ್ಷಗಳು ಮಾತ್ರ) ದಯಾತ್ಮಕ ಧನವನ್ನು ದಿನಾಂಕ: 08.06.2011 ರಿಂದ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರು ಮಾಡಲು ಆದೇಶಿಸಲಾಗಿದೆ.

(ಅ) ಹೀಗೆ ಮಂಜೂರು ಮಾಡಲಾದ ದಯಾತ್ಮಕ ಧನದಲ್ಲಿ ರೂ.2.00 ಲಕ್ಷಗಳನ್ನು ಘಟನೆ ನಡೆದ ಕ್ಷಣವೇ ವಾರಸುದಾರರಿಗೆ ನೀಡತಕ್ಕದ್ದು.

(ಆ) ಉಳಿದ ಮೊತ್ತ ರೂ.3.00 ಲಕ್ಷಗಳನ್ನು ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಹಂತದಲ್ಲಿ ವಿಚಾರಣೆ ನಡೆಸಿ ವಾರಸುದಾರರಿಗೆ ಬಿಡುಗಡೆ ಮಾಡತಕ್ಕದ್ದು.

2. ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 970 ವೆಚ್ಚ-5/2011, ದಿನಾಂಕ: 30.07.2011 ರನ್ವಯ ಸಹಮತಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ವಿ.ರಾಮಕೃಷ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

ಗೆ,
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ ಈ ಆದೇಶದ 500 ಪ್ರತಿಗಳನ್ನು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು - 560 003 ಇವರಿಗೆ ಒದಗಿಸಲು ಹಾಗೂ 250 ಪ್ರತಿಗಳನ್ನು ಮೇಲೆ ಸಹಿ ಮಾಡಿದವರಿಗೆ ಒದಗಿಸಲು ಕೋರಿದೆ.

<u>ಪ್ರತಿಗಳು:</u>

1. ಪ್ರಧಾನ ಮಹಾಲೇಖಪಾಲರು, (ಲೆಕ್ಕಪತ್ರ/ಲೆಕ್ಕಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
4. ಎಲ್ಲಾ ಅಪರ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು/ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು/ ಅರಣ್ಯ ಸಂರಕ್ಷಣಾಧಿಕಾರಿಗಳು/ಉಪ ಅರಣ್ಯ ಸಂರಕ್ಷಣಾಧಿಕಾರಿಗಳು (ಪ್ರಾದೇಶಿಕ/ವನ್ಯಜೀವಿ)/ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು (ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಬೆಂಗಳೂರು ಇವರ ಮುಖಾಂತರ).
5. ರಾಜ್ಯ ವನ್ಯಜೀವಿ ಮಂಡಳಿಯ ಉಪಾಧ್ಯಕ್ಷರ ಆಪ್ತ ಕಾರ್ಯದರ್ಶಿಗಳು, ವಿ.ವಿ.ಗೋಪುರ, ಡಾ॥ಅಂಬೇಡ್ಕರ್ ರಸ್ತೆ, ಬೆಂಗಳೂರು-1.
6. ಮಾನ್ಯ ಅರಣ್ಯ ಮತ್ತು ಸಣ್ಣ ಕೈಗಾರಿಕಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-5), ವಿಧಾನಸೌಧ, ಬೆಂಗಳೂರು.
8. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2018-19ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿದಂತೆ ವನ್ಯಪ್ರಾಣಿಗಳ ದಾಳಿಯಿಂದ ಮೃತಪಟ್ಟವರ ಕುಟುಂಬಕ್ಕೆ ದಯಾತ್ಮಕ ಧನದ ಜೊತೆಯಲ್ಲಿ ಮಾಸಾಶನ ಪಾವತಿಸುವ ಬಗ್ಗೆ.

ಓದಲಾಗಿದೆ: ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ(ವನ್ಯಜೀವಿ) ಇವರ ಪತ್ರ ಸಂಖ್ಯೆ: ಪ್ರಮುಅಸಂ(ವಜೀ)/ಸಿ2/ಸಿಆರ್-01/2017-18, ದಿನಾಂಕ: 04.04.2018.

***

**ಪ್ರಸ್ತಾವನೆ:**

2018-19ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-107ರಲ್ಲಿ "ವನ್ಯಪ್ರಾಣಿಗಳ ದಾಳಿಯಿಂದ ಮೃತಪಟ್ಟ ವ್ಯಕ್ತಿಗಳ ಕುಟುಂಬಕ್ಕೆ ಪ್ರಸ್ತುತ ನೀಡುತ್ತಿರುವ ರೂ.5.00ಲಕ್ಷ ಎಕ್ಸ್‌ಗ್ರೇಷಿಯಾ ಜೊತೆಗೆ ಮೃತರ ಕುಟುಂಬಕ್ಕೆ ರೂ.2000.00ಗಳಂತೆ ಮಾಸಾಶನವನ್ನು ಐದು ವರ್ಷಗಳವರೆಗೆ ನೀಡಲಾಗುವುದು" ಎಂದು ಮಾನ್ಯ ಮುಖ್ಯಮಂತ್ರಿಯವರು ಘೋಷಣೆ ಮಾಡಿರುತ್ತಾರೆ:

ಮೇಲೆ ಓದಲಾದ ದಿನಾಂಕ: 04.04.2018ರ ಪತ್ರದಲ್ಲಿ, ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಮಾನವ ಪ್ರಾಣಹಾನಿ ಹಾಗೂ ಶಾಶ್ವತ ಅಂಗವಿಕಲತೆಗೆ ಸಂಬಂಧಿಸಿದಂತೆ, ಪರಿಹಾರ ಮೊತ್ತದ ದಯಾತ್ಮಕಧನವನ್ನು ಸರ್ಕಾರದ ಆದೇಶ ಸಂಖ್ಯೆ: ಅಪಜೀ 143 ಎಫ್‌ಡಬ್ಲ್ಯೂಎಲ್ 2010, ದಿನಾಂಕ: 03.08.2011ರ ಮೇರೆಗೆ ಇಲಾಖಾ ವತಿಯಿಂದ ಪಾವತಿಸಲಾಗುತ್ತಿದೆ. ವನ್ಯಪ್ರಾಣಿಗಳಿಂದ ಮೃತನಾಗಿದ್ದಾನೆಂದು ದೃಢಪಟ್ಟಿದ್ದಲ್ಲಿ ಮರಣ ಹೊಂದಿದ ವ್ಯಕ್ತಿಯ ವಾರಸುದಾರರಿಗೆ ರೂ.5.00ಲಕ್ಷ ಪರಿಹಾರಧನವನ್ನು ನೀಡಲಾಗುತ್ತಿದೆ. ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾದ ಮಾನವ ಪ್ರಾಣಹಾನಿ, ಶಾಶ್ವತ ಅಂಗವಿಕಲತೆಗೆ ಸಂಬಂಧಿಸಿದಂತೆ, ಕಳೆದ ನಾಲ್ಕು ವರ್ಷಗಳಿಂದ ದಾಖಲಾದ ಪ್ರಕರಣಗಳ ವಿವರಗಳನ್ನು ಈ ಕೆಳಗಿನಂತೆ ನೀಡಿರುತ್ತಾರೆ.

| ಕ್ರಸಂ | ವರ್ಷ | ವನ್ಯಪ್ರಾಣಿ ದಾಳಿಯಿಂದ ಉಂಟಾದ ಹಾನಿ ಪ್ರಕರಣಗಳು | | |
|---|---|---|---|---|
| | | ಶಾಶ್ವತ ಅಂಗವಿಕಲತೆ | ಮೃತಪಟ್ಟವರ ಸಂಖ್ಯೆ | ಒಟ್ಟು |
| 1 | 2015-16 | 03 | 47 | 50 |
| 2 | 2016-17 | 05 | 49 | 54 |
| 3 | 2017-18 | 06 | 36 | 42 |

ಆದುದರಿಂದ ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಮಾನವ ಪ್ರಾಣಹಾನಿ ಮತ್ತು ಶಾಶ್ವತ ಅಂಗವಿಕಲತೆಯಿಂದ ಕಳೆದ 03(ಮೂರು) ವರ್ಷಗಳಲ್ಲಿ ದಾಖಲಾದ ಪ್ರಕರಣಗಳ ಆಧಾರದ ಮೇಲೆ ಪ್ರತಿ ವರ್ಷಕ್ಕೆ ಸರಾಸರಿ 55(50+5) ಪ್ರಕರಣಗಳಿಗೆ ಪ್ರತಿ ತಿಂಗಳಿಗೆ ರೂ.2000.00ರಂತೆ ಒಟ್ಟು ರೂ.13.00ಲಕ್ಷಗಳ(ಹದಿಮೂರು ಲಕ್ಷ ರೂಪಾಯಿ ಮಾತ್ರ) ಅನುದಾನ ಅವಶ್ಯವಿರುತ್ತದೆ. ಸದರಿ ಮಾಸಾಶನವನ್ನು 2018-19ನೇ ಸಾಲಿನಿಂದ ಕಾರ್ಯಗತಗೊಳಿಸಲು ಅನುಮೋದನೆ ನೀಡುವಂತೆ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ(ವನ್ಯಜೀವಿ) ರವರು ಕೋರಿರುತ್ತಾರೆ.

...2

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಅಪಜೀ 61 ಎಫ್‌ಎಪಿ 2018**
**ಬೆಂಗಳೂರು, ದಿನಾಂಕ: 16.10.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ವನ್ಯಪ್ರಾಣಿಗಳ ದಾಳಿ/ಹಾವಳಿಯಿಂದ ಉಂಟಾದ ಮಾನವ ಪ್ರಾಣಹಾನಿ ಪ್ರಕರಣಗಳಲ್ಲಿ ಮೃತಪಟ್ಟ ವ್ಯಕ್ತಿಗಳ ಕುಟುಂಬಕ್ಕೆ ಹಾಗೂ ಶಾಶ್ವತ ಅಂಗವಿಕಲತೆಗೊಳಗಾದ ವ್ಯಕ್ತಿಗಳಿಗೆ ಈಗ ನೀಡುತ್ತಿರುವ ರೂ.5.00ಲಕ್ಷ ದಯಾತ್ಮಕಧನದ ಜೊತೆಗೆ ಪ್ರತಿ ತಿಂಗಳು ರೂ.2,000=00(ಎರಡು ಸಾವಿರ ರೂಪಾಯಿಗಳು ಮಾತ್ರ)ಗಳಂತೆ ಐದು ವರ್ಷಗಳವರೆಗೆ ಮಾಸಾಶನವನ್ನು ನೀಡಲು ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 500 ವೆಚ್ಚ-5/2018, ದಿನಾಂಕ: 08.08.2018 ಮತ್ತು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 10 ಪಿಎಫ್‌ಒ 2018, ದಿನಾಂಕ: 24.08.2018ರಲ್ಲಿ ನೀಡಿದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

16/10

(ಹೆಚ್.ಎಸ್.ಭಾಗ್ಯಲಕ್ಷ್ಮಿ)
ಸರ್ಕಾರದ ಉಪ ಕಾರ್ಯದರ್ಶಿ,
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ

16/10 O/C

ಇವರಿಗೆ:

1. ಮಹಾಲೇಖಪಾಲರು (ಲೆಕ್ಕಪತ್ರ/ಲೆಕ್ಕ ಪರಿಶೋಧನೆ), ಕರ್ನಾಟಕ, ಬೆಂಗಳೂರು.
2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ(ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ(ವನ್ಯಜೀವಿ), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
4. ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ(ಕೇಂದ್ರಸ್ಥಾನ ಮತ್ತು ಸಮನ್ವಯ) ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
5. ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ(ಅಭಿವೃದ್ಧಿ), ಅರಣ್ಯಭವನ, ಮಲ್ಲೇಶ್ವರಂ, ಬೆಂಗಳೂರು.
6. ಆಯುಕ್ತರು, ಮತ್ತು ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಇಲಾಖೆ, 1ನೇ ಮುಖ್ಯ ರಸ್ತೆ, ಗಾಂಧಿ ನಗರ, ಬೆಂಗಳೂರು-560009.
7. ನಿರ್ದೇಶಕರು, ಖಜಾನೆ ನಿರ್ದೇಶನಾಲಯ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಗೋಪುರ, ಬೆಂಗಳೂರು.

8. ನಿರ್ದೇಶಕರು, ಪರಿಯೋಜನಾ ರಚನಾ ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಉಪ ನಿರ್ದೇಶಕರು, ಖಜಾನೆ ಗಣಕಜಾಲ, ಖನಿಜಭವನ, ಬೆಂಗಳೂರು.
10. ಸರ್ಕಾರದ ಉಪಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನಸೌಧ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.
12. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-5), ವಿಧಾನಸೌಧ, ಬೆಂಗಳೂರು.
13. ಶಾಖಾ ರಕ್ಷಾ ಕಡತ.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2014-15ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಣೆಯಾದ ಹೊಸ ಕಾರ್ಯಕ್ರಮ:- ವನ್ಯ ಪ್ರಾಣಿಗಳಿಂದ ಉಂಟಾದ ಬೆಳೆಹಾನಿ ದನ-ಎಮ್ಮೆಗಳ ಪ್ರಾಣಹಾನಿಗೆ ಪರಿಹಾರ ಹೆಚ್ಚಿಸುವ ಕುರಿತು.

ಓದಲಾಗಿದೆ : ಸರ್ಕಾರದ ಆದೇಶದ ಸಂಖ್ಯೆ: ಅಪಜೀ 143 ಎಫ್‌ಡಬ್ಲ್ಯೂಎಲ್ 2010, ದಿನಾಂಕ 30-04-2011.

****

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ 30-04-2011ರ ಸರ್ಕಾರದ ಆದೇಶದಲ್ಲಿ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಬೆಳೆನಾಶ, ಮಾನವ ಪ್ರಾಣಹಾನಿ, ಸಾಕುಪ್ರಾಣಿಗಳ ಪ್ರಾಣಹಾನಿ, ಶಾಶ್ವತ ಅಂಗವಿಕಲತೆ, ಗಾಯ ಗೊಂಡವರಿಗೆ ಹಾಗೂ ಆಸ್ತಿ-ಪಾಸ್ತಿ ನಷ್ಟಕ್ಕೆ ಸಂಬಂಧಿಸಿದಂತೆ ಪರಿಹಾರ ಮೊತ್ತವನ್ನು ನಿಗದಿಪಡಿಸಿ ವಿತರಿಸಲು ಅರಣ್ಯ ಇಲಾಖೆಯ ಕ್ಷೇತ್ರಾಧಿಕಾರಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಿ ಮಂಜೂರಾತಿ ನೀಡಲಾಗಿದೆ.

2. ಸರ್ಕಾರವು 2014-15ನೇ ಸಾಲಿನ ಆಯವ್ಯಯದಲ್ಲಿ, "ಮಾನವ-ವನ್ಯಜೀವಿ ಸಂಘರ್ಷದಿಂದಾಗಿ ದನ-ಕರುಗಳು/ಸಾಕು ಪ್ರಾಣಿಗಳು ಮೃತಪಟ್ಟಲ್ಲಿ ಅವುಗಳ ಮಾಲೀಕರಿಗೆ ಹಾಲಿ ನೀಡಲಾಗುತ್ತಿರುವ ಪರಿಹಾರ ಧನವನ್ನು ರೂ.2500-3000 ಗಳಿಂದ ರೂ.5000-6000 ಗಳಿಗೆ ಹೆಚ್ಚಿಸಲು ಹಾಗೂ ಬೆಳೆ ಹಾನಿ ಉಂಟಾದಲ್ಲಿ ಸಂತ್ರಸ್ಥ ರೈತರಿಗೆ ನೀಡಲಾಗುತ್ತಿರುವ ಪರಿಹಾರದ ಧನದ ಗರಿಷ್ಟ ಮಿತಿಯನ್ನು ರೂ.50,000/- ಗಳಿಂದ ರೂ.75,000/- ಗಳಿಗೆ ಹೆಚ್ಚಿಸಲಾಗುವುದು ಎಂದು ಘೋಷಿಸಿರುತ್ತದೆ.

3. ಪ್ರಸ್ತುತ ಜಾರಿಯಲ್ಲಿರುವ ಸರ್ಕಾರಿ ಆದೇಶ ಸಂಖ್ಯೆ: ಅಪಜೀ 143 ಎಫ್‌ಡಬ್ಲ್ಯೂಎಲ್ 2010, ದಿನಾಂಕ: 30.04.2011ರನ್ವಯ 2009-10ನೇ ಸಾಲಿನಿಂದ 2013-14ನೇ ಸಾಲಿನವರೆಗೆ ಒಟ್ಟು 1,23,191 ಬೆಳೆ ನಾಶ ಪ್ರಕರಣಗಳು ಸಂಭವಿಸಿದ್ದು, ಈ ಉದ್ದೇಶಕ್ಕಾಗಿ ಕಳೆದ 05 ವರ್ಷಗಳಲ್ಲಿ ಒಟ್ಟು ರೂ.32,76,67,671/- ಗಳನ್ನು ಬೆಳೆನಾಶಗೊಂಡ ರೈತರಿಗೆ ಪಾವತಿಸಲಾಗಿದೆ

4. ವನ್ಯಪ್ರಾಣಿಗಳಿಂದ ದನ-ಕರುಗಳ ಪ್ರಾಣಹಾನಿಗೆ ಕನಿಷ್ಟ ರೂ. 2,500/- ಗರಿಷ್ಟ ರೂ. 3,000/- ಪಾವತಿಸಲಾಗುತ್ತಿದೆ. ಇದನ್ನು ಕಳೆದ 5 ವರ್ಷಗಳಲ್ಲಿ ಅಂದರೆ 2009-10ನೇ ಸಾಲಿನಿಂದ 2013-14ನೇ ಸಾಲಿನವರೆಗೆ ವನ್ಯಪ್ರಾಣಿಗಳಿಂದ ಒಟ್ಟು 4073 ದನಕರುಗಳ ಪ್ರಾಣಹಾನಿ ಸಂಭವಿಸಿರುತ್ತದೆ. ಇದಕ್ಕಾಗಿ 05 ವರ್ಷಗಳಲ್ಲಿ ಒಟ್ಟು ರೂ.1,29,95,943/- ಗಳನ್ನು ಪ್ರಾಣಿಗಳ ಮಾಲೀಕರಿಗೆ ಪಾವತಿಸಲಾಗಿದೆ.

5. ಪ್ರಸ್ತುತ ಮಾನವ-ವನ್ಯಜೀವಿ ಸಂಘರ್ಷದಿಂದಾಗಿ ಹಸು, ಎತ್ತು, ಎಮ್ಮೆ, ಕೋಣಗಳು ಮೃತಪಟ್ಟಲ್ಲಿ ಅವುಗಳ ಮಾಲೀಕರಿಗೆ ನೀಡಲಾಗುತ್ತಿರುವ ಪರಿಹಾರ ಧನವನ್ನು ರೂ.10,000/- ಕ್ಕೆ ಹೆಚ್ಚಿಸಲು ಹಾಗೂ ಮೇಕೆ, ಕುರಿಗಳು ಮೃತಪಟ್ಟಲ್ಲಿ ಅವುಗಳ ಮಾಲೀಕರಿಗೆ ನೀಡಲಾಗುತ್ತಿರುವ ಪರಿಹಾರ ಧನವನ್ನು ರೂ.5,000/-ಗಳಿಗೆ ಹೆಚ್ಚಿಸಲು ಹಾಗೂ ಬೆಳೆ ಹಾನಿ ಉಂಟಾದಲ್ಲಿ ಸಂತ್ರಸ್ಥ ರೈತರಿಗೆ ನೀಡಲಾಗುತ್ತಿರುವ ಪರಿಹಾರ ಧನದ ಗರಿಷ್ಟ ಮಿತಿಯನ್ನು ರೂ.1,00,000/-ಗಳಿಗೆ ಹೆಚ್ಚಿಸಲು ಸರ್ಕಾರವು ನಿರ್ಧರಿಸಿರುವುದರಿಂದ ಈ ಕೆಳಕಂಡ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಅಪಜೀ 109 ಎಫ್‌ಎಪಿ 2014**

**ಬೆಂಗಳೂರು, ದಿನಾಂಕ: 13-08-2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ರಾಜ್ಯ ಸರ್ಕಾರವು 2014-15ನೇ ಸಾಲಿನಿಂದ ಜಾರಿಗೆ ಬರುವಂತೆ ಮಾನವ-ವನ್ಯಜೀವಿ ಸಂಘರ್ಷದಿಂದಾಗಿ ಹಸು, ಎತ್ತು, ಎಮ್ಮೆ ಕೋಣಗಳು ಮೃತಪಟ್ಟಲ್ಲಿ ಅವುಗಳ ಮಾಲೀಕರಿಗೆ ನೀಡಲಾಗುತ್ತಿರುವ ಪರಿಹಾರ ಧನವನ್ನು ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ)ಕ್ಕೆ ಹೆಚ್ಚಿಸಲು ಹಾಗೂ ಮೇಕೆ, ಕುರಿಗಳು ಮೃತಪಟ್ಟಲ್ಲಿ ಅವುಗಳ ಮಾಲೀಕರಿಗೆ ನೀಡಲಾಗುತ್ತಿರುವ ಪರಿಹಾರ ಧನವನ್ನು ರೂ.5,000/- (ಐದು ಸಾವಿರ ರೂಪಾಯಿಗಳು ಮಾತ್ರ)ಗಳಿಗೆ ಹೆಚ್ಚಿಸಲು ಹಾಗೂ ಬೆಳೆ ಹಾನಿ ಉಂಟಾದಲ್ಲಿ ಸಂತ್ರಸ್ಥ ರೈತರಿಗೆ ನೀಡಲಾಗುತ್ತಿರುವ ಪರಿಹಾರದ ಧನದ ಗರಿಷ್ಟ ಮಿತಿಯನ್ನು ರೂ.50,000/- ರಿಂದ ರೂ.1,00,000/-(ಒಂದು ಲಕ್ಷ ರೂಪಾಯಿಗಳು ಮಾತ್ರ)ಗಳಿಗೆ ಹೆಚ್ಚಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.

ಸಂತ್ರಸ್ಥರಿಗೆ ಪರಿಹಾರ ಮಂಜೂರಾತಿ ಸಂದರ್ಭದಲ್ಲಿ ಸರ್ಕಾರದ ಆದೇಶ ಸಂಖ್ಯೆ: ಅಪಜೀ 143 ಎಫ್‌ಡಬ್ಲ್ಯುಎಲ್ 2010 ದಿನಾಂಕ: 30-04-2011 ಮತ್ತು ಸರ್ಕಾರದ ಆದೇಶ ಸಂಖ್ಯೆ: ಅಪಜೀ 143 ಎಫ್‌ಡಬ್ಲ್ಯುಎಲ್ 2010 ದಿನಾಂಕ:03-08-2011ರಲ್ಲಿರುವ ಷರತ್ತು ಮತ್ತು ನಿರ್ಬಂಧನೆಗಳನ್ನು ಪಾಲಿಸತಕ್ಕದ್ದು.

ಸದರಿ ಪ್ರಸ್ತಾವನೆಗೆ ತಗಲುವ ವೆಚ್ಚವನ್ನು 2014-15ನೇ ಸಾಲಿನ ಲೆಕ್ಕ ಶೀರ್ಷಿಕೆ 2406-02-110-0-01-015(ಯೋಜನೇತರ)ರಡಿ ಭರಿಸತಕ್ಕದ್ದು.

ಸದರಿ ಆದೇಶವನ್ನು ಯೋಜನಾ ಇಲಾಖೆಯು ಟಿಪ್ಪಣಿ ಸಂಖ್ಯೆ: ಪಿಡಿ 21 ಪಿಎಫ್‌ಓ 2014, ದಿನಾಂಕ: 07.06.2014ರಲ್ಲಿ ನೀಡಿದ ಸಹಮತಿ ಮತ್ತು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 505 ವೆಚ್ಚ-5/ 2014, ದಿನಾಂಕ: 16.06.2014ರಲ್ಲಿ ನೀಡಿದ ಸಹಮತಿಗಳನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ಪಿ.ಪಾಟೀಲ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

ಇವರಿಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು 01 ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿದೆ.

1) ಮಹಾಲೇಖಪಾಲರು, (ಲೆಕ್ಕಪತ್ರ/ಲೆಕ್ಕ ಪರಿಶೋಧನೆ), ಕರ್ನಾಟಕ, ಬೆಂಗಳೂರು.
2) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
3) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
4) ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅಭಿವೃದ್ಧಿ), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
5) ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಕೇಂದ್ರಸ್ಥಾನ ಮತ್ತು ಸಮನ್ವಯ)ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
6) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ(ಸಚಿವ ಸಂಪುಟ ಶಾಖೆ) ಇವರಿಗೆ (ಸಚಿವ ಸಂಪುಟದ ಪ್ರಕರಣ ಸಂಖ್ಯೆ: ಸಿ/441/2014, ದಿನಾಂಕ: 06-08-2014ರನ್ವಯ).
7) ನಿರ್ದೇಶಕರು, ಖಜಾನೆ ನಿರ್ದೇಶನಾಲಯ, ಪೋಡಿಯಂ ಬ್ಲಾಕ್, ಬೆಂಗಳೂರು.
8) ಎಲ್ಲಾ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ – ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಮುಖಾಂತರ ರವಾನಿಸುವುದು.
9) ನಿರ್ದೇಶಕರು (ಪಿ.ಎಫ್.ಡಿ) ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10) ಉಪ ನಿರ್ದೇಶಕರು, ಗಣಕ ಅಂತರ್ ಜಾಲ, ಖಜಾನೆ ಇಲಾಖೆ, ಖನಿಜ ಭವನ, ಬೆಂಗಳೂರು.
11) ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.
12) ಮಾನ್ಯ ಅರಣ್ಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
13) ಸರ್ಕಾರದ ಅಧೀನ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
14) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-5), ವಿಧಾನ ಸೌಧ, ಬೆಂಗಳೂರು.
15) ಸರ್ಕಾರದ ಅಧೀನ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ (ಸ[illegible])